**National Bulletin In Kannada**

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**12.07.2024** **19.35 hrs**

**<><*<><>*><>**

ಮುಖ್ಯಾಂಶಗಳು

**೧. ಪ್ರತಿ ವರ್ಷ ಜೂನ್ ೨೫ ರಂದು 'ಸಂವಿಧಾನ ಹತ್ಯಾ ದಿನ' ಆಚರಣೆ; ಕೇಂದ್ರ ಸರ್ಕಾರ ನಿರ್ಧಾರ**

**೨. ಬಿಮ್‌ಸ್ಟೆಕ್ ಸದಸ್ಯ ರಾಷ್ಟ್ರಗಳ ವಿದೇಶಾಂಗ ಸಚಿವರೊಂದಿಗೆ ಪ್ರಧಾನಿ ನರೇಂದ್ರ ಮೋದಿ ಮಾತುಕತೆ**

**೩. ಹವಾಮಾನ ಬದಲಾವಣೆ ಸೇರಿದಂತೆ ವಿವಿಧ ಕ್ಷೇತ್ರಗಳಲ್ಲಿ ಒಟ್ಟಾಗಿ ಕೆಲಸ ಮಾಡಲು ಭಾರತ, ಭೂತಾನ್ ಪರಸ್ಪರ ಒಪ್ಪಿಗೆ**

**೪. ತಮಿಳುನಾಡಿಗೆ ಕಾವೇರಿ ನೀರು; ರಾಜ್ಯದಲ್ಲಿ ಇದೇ ಭಾನುವಾರ ಸರ್ವಪಕ್ಷಗಳ ಸಭೆ**

**೫. ವಿಂಬಲ್ಡನ್ ಟೆನಿಸ್ ಪಂದ್ಯಾವಳಿ: ಸೆಮಿಫೈನಲ್‌ನಲ್ಲಿಂದು ಜೊಕೊವಿಕ್-ಮುಸೆಟ್ಟಿ ಮುಖಾಮುಖಿ**

**<><*<><>*><>**

ಪ್ರತಿ ವರ್ಷ ಜೂನ್ ೨೫ ರಂದು 'ಸಂವಿಧಾನ ಹತ್ಯಾ ದಿನ' ಎಂದು ಆಚರಿಸಲು ಕೇಂದ್ರ ಸರ್ಕಾರ ನಿರ್ಧರಿಸಿದೆ. ೧೯೭೫ರಂದು ಈ ದಿನ ಅಂದಿನ ಪ್ರಧಾನಿ ಇಂದಿರಾ ಗಾಂಧಿ ಅವರು ದೇಶದಲ್ಲಿ ತುರ್ತು ಪರಿಸ್ಥಿತಿ ಹೇರಿದ್ದರು. ಈ ಕುರಿತು ಸಾಮಾಜಿಕ ಮಾಧ್ಯಮದ ಪೋಸ್ಟ್‌ನಲ್ಲಿ ಮಾಹಿತಿ ಹಂಚಿಕೊಂಡ ಕೇಂದ್ರ ಗೃಹ ಸಚಿವ ಅಮಿತ್ ಶಾ, ದಬ್ಬಾಳಿಕೆಯ ಸರ್ಕಾರದ ಕೈಯಲ್ಲಿ ವಿವರಿಸಲಾಗದ ಕಿರುಕುಳವನ್ನು ಎದುರಿಸುತ್ತಿದ್ದರೂ ಪ್ರಜಾಪ್ರಭುತ್ವವನ್ನು ಪುನರುಜ್ಜೀವನಗೊಳಿಸಲು ಹೋರಾಡಿದ ಲಕ್ಷಾಂತರ ಜನರ ಧೈರ್ಯವನ್ನು ಗೌರವಿಸಲು ಈ ನಿರ್ಧಾರವನ್ನು ಕೈಗೊಳ್ಳಲಾಗಿದೆ. 'ಸಂವಿಧಾನ್ ಹತ್ಯಾ ದಿವಸ್' ಆಚರಣೆಯು ಪ್ರತಿಯೊಬ್ಬ ಭಾರತೀಯನಲ್ಲೂ ವೈಯಕ್ತಿಕ ಸ್ವಾತಂತ್ರ್ಯದ ಶಾಶ್ವತ ಜ್ವಾಲೆ ಮತ್ತು ದೇಶದ ಪ್ರಜಾಪ್ರಭುತ್ವದ ರಕ್ಷಣೆಯನ್ನು ಜೀವಂತವಾಗಿರಿಸಲು ಸಹಾಯ ಮಾಡುತ್ತದೆ ಎಂದು ಹೇಳಿದ್ದಾರೆ. ೧೯೭೫ರ ಜೂನ್ ೨೫ ರಂದು ಅಂದಿನ ಪ್ರಧಾನಿ ಇಂದಿರಾ ಗಾಂಧಿ ಅವರು ಸರ್ವಾಧಿಕಾರಿ ಮನಸ್ಥಿತಿಯಿಂದ ರಾಷ್ಟ್ರದ ಮೇಲೆ ತುರ್ತು ಪರಿಸ್ಥಿತಿಯನ್ನು ಹೇರುವ ಮೂಲಕ ಭಾರತೀಯ ಪ್ರಜಾಪ್ರಭುತ್ವದ ಕತ್ತು ಹಿಸುಕಿದ್ದರು. ತಮ್ಮದಲ್ಲದ ತಪ್ಪಿಗೆ ಲಕ್ಷಾಂತರ ಜನರನ್ನು ಜೈಲಿಗೆ ಕಳುಹಿಸಲಾಗಿತ್ತು ಮತ್ತು ಮಾಧ್ಯಮಗಳ ಧ್ವನಿಯನ್ನು ಅಡಗಿಸಲಾಗಿತ್ತು ಎಂದು ಅಮಿತ್ ಶಾ ದೂರಿದ್ದಾರೆ. ಭಾರತದ ಸಂವಿಧಾನದ ಕತ್ತು ಹಿಸುಕಿದಾಗ ಏನಾಗುತ್ತದೆ ಎಂಬುದನ್ನು 'ಸಂವಿಧಾನ ಹತ್ಯಾ ದಿನ' ನೆನಪಿಸುತ್ತದೆ ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದ್ದಾರೆ. ಭಾರತೀಯ ಇತಿಹಾಸದ ಕರಾಳ ಘಟ್ಟವನ್ನು ಕಾಂಗ್ರೆಸ್ ಬಿಚ್ಚಿಟ್ಟಿದೆ. ಈ ದಿನವು ತುರ್ತು ಪರಿಸ್ಥಿತಿಯ ಕಾರಣದಿಂದ ನೋವು ಅನುಭವಿಸಿದ ಪ್ರತಿಯೊಬ್ಬ ವ್ಯಕ್ತಿಗೆ ಗೌರವ ಸಲ್ಲಿಸುವ ದಿನವಾಗಿದೆ ಎಂದು ಅವರು ಹೇಳಿದ್ದಾರೆ.

**<><*<><>*><>**

ಶಾಂತಿಯುತ, ಸಮೃದ್ಧ, ಚೇತರಿಸಿಕೊಳ್ಳುವ ಮತ್ತು ಸುರಕ್ಷಿತ ಬಿಮ್‌ಸ್ಟೆಕ್ ವಲಯಕ್ಕೆ ಭಾರತದ ಬದ್ಧತೆಯನ್ನು ಪ್ರಧಾನಿಮಂತ್ರಿ ನರೇಂದ್ರ ಮೋದಿ ಪುನರುಚ್ಚರಿಸಿದರು. ಇದೇ ವೇಳೆ, ಆರ್ಥಿಕ ಮತ್ತು ಸಾಮಾಜಿಕ ಬೆಳವಣಿಗೆಗೆ ಎಂಜಿನ್‌ನಂತೆ ಬಿಮ್‌ಸ್ಟೆಕ್ ಕಾರ್ಯ ನಿರ್ವಹಿಸಲಿದೆ ಎಂದು ಅವರು ಹೇಳಿದರು. ಬಿಮ್‌ಸ್ಟೆಕ್ ಸದಸ್ಯ ರಾಷ್ಟ್ರಗಳ ವಿದೇಶಾಂಗ ಸಚಿವರು ಇಂದು ನವದೆಹಲಿಯಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರನ್ನು ಭೇಟಿ ಮಾಡಿ, ಮಾತುಕತೆ ನಡೆಸಿದರು. ಸಂಪರ್ಕ, ಇಂಧನ, ವ್ಯಾಪಾರ, ಆರೋಗ್ಯ, ಕೃಷಿ, ವಿಜ್ಞಾನ, ಭದ್ರತೆ ಸೇರಿದಂತೆ ವಿವಿಧ ಕ್ಷೇತ್ರಗಳಲ್ಲಿ ಪ್ರಾದೇಶಿಕ ಸಹಕಾರವನ್ನು ಬಲಪಡಿಸುವ ಕುರಿತು ಪ್ರಧಾನಿ ನರೇಂದ್ರ ಮೋದಿ ಅವರು ಬಿಮ್‌ಸ್ಟೆಕ್ ಸದಸ್ಯ ರಾಷ್ಟ್ರಗಳ ವಿದೇಶಾಂಗ ಸಚಿವರೊಂದಿಗೆ ಫಲಪ್ರದ ಚರ್ಚೆ ನಡೆಸಿದರು. ಸಭೆಯಲ್ಲಿ ಪ್ರಧಾನಿ ಮೋದಿಯವರು, ಬಿಮ್‌ಸ್ಟೆಕ್ ಪ್ರಾಮುಖ್ಯತೆಯನ್ನು, ಭಾರತದ 'ನೆರೆಹೊರೆ ಮೊದಲು', 'ಆಕ್ಟ್ ಈಸ್ಟ್ ಪಾಲಿಸಿ' ಮತ್ತು 'ಸಾಗರ್' ದೃಷ್ಟಿಕೋನದಲ್ಲಿ ಭದ್ರತೆ ಮತ್ತು ಎಲ್ಲರ ಬೆಳವಣಿಗೆಯ ಕುರಿತು ಒತ್ತಿ ಹೇಳಿದರು. ಮುಂಬರುವ ಸೆಪ್ಟೆಂಬರ್‌ನಲ್ಲಿ ಥಾಯ್ಲೆಂಡ್‌ನಲ್ಲಿ ನಡೆಯಲಿರುವ ಬಿಮ್‌ಸ್ಟೆಕ್ ಶೃಂಗಸಭೆಗೆ ಭಾರತದ ಸಂಪೂರ್ಣ ಬೆಂಬಲವನ್ನು ಅವರು ವ್ಯಕ್ತಪಡಿಸಿದರು.

<><*<><>*><>

ವಾಯು ಗುಣಮಟ್ಟ, ಅರಣ್ಯ, ವನ್ಯಜೀವಿ ನಿರ್ವಹಣೆ, ಪರಿಸರ ಮತ್ತು ಹವಾಮಾನ ಬದಲಾವಣೆ ಕ್ಷೇತ್ರಗಳಲ್ಲಿ ಒಟ್ಟಾಗಿ ಕೆಲಸ ಮಾಡಲು ಭಾರತ ಮತ್ತು ಭೂತಾನ್ ಒಪ್ಪಿಕೊಂಡಿವೆ. ಭೂತಾನ್‌ನ ಇಂಧನ ಮತ್ತು ನೈಸರ್ಗಿಕ ಸಂಪನ್ಮೂಲಗಳ ಸಚಿವ ಜೆಮ್ ಶೆರಿಂಗ್ ನೇತೃತ್ವದ ಭೂತಾನ್‌ನ ನಿಯೋಗವು ನವದೆಹಲಿಯಲ್ಲಿ ಇಂದು ಕೇಂದ್ರ ಪರಿಸರ, ಅರಣ್ಯ ಮತ್ತು ಹವಾಮಾನ ಬದಲಾವಣೆ ರಾಜ್ಯ ಸಚಿವ ಕೀರ್ತಿ ವರ್ಧನ್ ಸಿಂಗ್ ಅವರನ್ನು ಭೇಟಿ ಮಾಡಿತು. ಗಾಳಿಯ ಗುಣಮಟ್ಟ, ಹವಾಮಾನ ಬದಲಾವಣೆ, ಅರಣ್ಯ, ನೈಸರ್ಗಿಕ ಸಂಪನ್ಮೂಲಗಳು, ವನ್ಯಜೀವಿಗಳು ಮತ್ತು ನವೀಕರಿಸಬಹುದಾದ ಇಂಧನಕ್ಕೆ ಸಂಬಂಧಿಸಿದ ವಿಷಯಗಳ ಕುರಿತು ಉಭಯ ನಾಯಕರು ಚರ್ಚಿಸಿದರು. ಭಾರತದ ಜಾಗತಿಕ ಉಪಕ್ರಮವಾದ ಇಂಟರ್‌ನ್ಯಾಶನಲ್ ಬಿಗ್ ಕ್ಯಾಟ್ ಅಲೈಯನ್ಸ್‌ಗೆ ಸೇರಿದ್ದಕ್ಕಾಗಿ ಭೂತಾನ್ ಸಚಿವರಿಗೆ ಕೀರ್ತಿ ವರ್ಧನ್ ಸಿಂಗ್ ಧನ್ಯವಾದ ಸಲ್ಲಿಸಿದರು. ಉಭಯ ದೇಶಗಳು ಒಂದೇ ಭೌಗೋಳಿಕತೆ, ಪರಿಸರ ವ್ಯವಸ್ಥೆ ಮತ್ತು ಪ್ರಜಾಪ್ರಭುತ್ವದ ಸಾಮಾನ್ಯ ಮೌಲ್ಯಗಳನ್ನು ಹೊಂದಿವೆ. ಹವಾಮಾನ ಬದಲಾವಣೆಯು ಎರಡೂ ದೇಶಗಳಿಗೆ ಕಾಳಜಿಯ ವಿಷಯವಾಗಿದೆ ಎಂದು ಕೀರ್ತಿ ವರ್ಧನ್ ಸಿಂಗ್ ಇದೇ ವೇಳೆ ಹೇಳಿದರು.

<><*<><>*><>

ತಮಿಳುನಾಡಿಗೆ ಪ್ರತಿದಿನ ಒಂದು ಟಿಎಂಸಿ ನೀರು ಹರಿಸುವಂತೆ ಕಾವೇರಿ ನೀರು ನಿಯಂತ್ರಣ ಸಮಿತಿ ನೀಡಿರುವ ಆದೇಶದ ವಿರುದ್ಧ ಕಾವೇರಿ ನೀರು ನಿರ್ವಹಣಾ ಪಾಧಿಕಾರಕ್ಕೆ ಮೇಲ್ಮನವಿ ಸಲ್ಲಿಸಲಾಗುವುದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ. ಗೃಹ ಕಚೇರಿ ಕೃಷ್ಣಾದಲ್ಲಿಂದು ಸಚಿವರು ಮತ್ತು ಅಧಿಕಾರಿಗಳ ಸಭೆಯ ನಂತರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಈ ಬಾರಿ ರಾಜ್ಯದಲ್ಲಿ ವಾಡಿಕೆಯ ಮಳೆಯಾಗಲಿದೆ ಎಂದು ಹವಾಮಾನ ಇಲಾಖೆ ಮುನ್ಸೂಚನೆ ನೀಡಿದ್ದರೂ ಸಹ ಇದುವರೆಗೆ ಜಲಾಶಯಗಳಿಗೆ ಶೇಕಡ ೨೮ ರಷ್ಟು ಒಳಹರಿವಿನ ಕೊರತೆಯಿದೆ. ಇದನ್ನು ಕಾವೇರಿ ಸಮಿತಿಗೆ ತಿಳಿಸಲಾಗಿತ್ತು. ಈ ತಿಂಗಳ ಅಂತ್ಯದವರೆಗೂ ಯಾವುದೇ ಆದೇಶ ನೀಡಬಾರದು ಎಂದು ಮನವಿ ಮಾಡಲಾಗಿತ್ತು. ಆದರೂ, ಇಂದಿನಿಂದ ತಮಿಳುನಾಡಿಗೆ ಪ್ರತಿದಿನ ಒಂದು ಟಿಎಂಸಿ ನೀರು ಬಿಡುಗಡೆ ಮಾಡುವಂತೆ ಸಮಿತಿ ಸೂಚಿಸಿದೆ. ಇದನ್ನು ಪ್ರಶ್ನಿಸಿ ಕಾವೇರಿ ಪ್ರಾಧಿಕಾರಕ್ಕೆ ಮೇಲ್ಮನವಿ

ಸಲ್ಲಿಸಬೇಕು ಎಂದು ಇಂದು ನಡೆದ ಸಭೆಯಲ್ಲಿ ಅಭಿಪ್ರಾಯ ವ್ಯಕ್ತವಾಗಿದೆ ಎಂದು ಹೇಳಿದರು. ಈ ತಿಂಗಳ ೧೪ ರಂದು ಭಾನುವಾರ ಸಂಜೆ ೪ ಗಂಟೆಗೆ ಸರ್ವಪಕ್ಷ ಸಭೆ ನಡೆಸಲು ತೀರ್ಮಾನಿಸಲಾಗಿದೆ. ರಾಜ್ಯದ ನೀರಿನ ವಿಚಾರದಲ್ಲಿ ಎಲ್ಲ ಪಕ್ಷಗಳೂ ಸಹಮತ ಹೊಂದಿವೆ. ಕೇಂದ್ರ ಸಚಿವರು, ಕಾವೇರಿ ಭಾಗದ ಸಂಸದರು ಮತ್ತು ಶಾಸಕರನ್ನು ಸಭೆಗೆ ಆಹ್ವಾನಿಸಲಾಗುವುದು. ಎಲ್ಲರನ್ನೂ ವಿಶ್ವಾಸಕ್ಕೆ ತೆಗೆದುಕೊಂಡು ಸರ್ಕಾರ ಮುಂದಿನ ತೀರ್ಮಾನ ಮಾಡಲಿದೆ ಎಂದು ಮುಖ್ಯಮಂತ್ರಿ ತಿಳಿಸಿದ್ದಾರೆ.

<><*<><>*><>

ಸೇನೆಯಲ್ಲಿ ಯೋಧರನ್ನು ನೇಮಕ ಮಾಡಿಕೊಳ್ಳುವ ಅಗ್ನಿವೀರ್ ಯೋಜನೆಯ ಮಾಜಿ ಅಗ್ನಿವೀರರಿಗೆ ಗಡಿ ಭದ್ರತಾ ಪಡೆ ಮತ್ತು ಕೇಂದ್ರೀಯ ಸಶಸ್ತ್ರ ಪೊಲೀಸ್ ಪಡೆಯಲ್ಲಿ ಶೇಕಡ ೧೦ರಷ್ಟು ಮೀಸಲಾತಿ ನೀಡಲು ಕೇಂದ್ರ ಗೃಹ ಸಚಿವಾಲಯ ನಿರ್ಧರಿಸಿದೆ. ಈ ನೇಮಕದ ವೇಳೆ ಅಗ್ನಿವೀರರಿಗೆ ದೈಹಿಕ ಪರೀಕ್ಷೆಯಿಂದ ವಿನಾಯಿತಿ ಇರಲಿದೆ. ಮಾಜಿ ಅಗ್ನಿವೀರರಿಗೆ ನೇಮಕಾತಿ ಸಂದರ್ಭದಲ್ಲಿ ವಯೋಮಿತಿಯ ಮಾನದಂಡವನ್ನು ಸಡಿಗೊಳಿಸಲಾಗುವುದು ಎಂದು ಗಡಿ ಭದ್ರತಾಪಡೆ, ಕೇಂದ್ರ ಮೀಸಲು ಪೊಲೀಸ್ ಪಡೆ, ಕೇಂದ್ರೀಯ ಕೈಗಾರಿಕಾ ಭದ್ರತಾ ಪಡೆ ಮತ್ತು ಸಶಸ್ತ್ರ ಸೀಮಾಬಲ ಪಡೆಗಳ ಮುಖ್ಯಸ್ಥರು ತಿಳಿಸಿದ್ದಾರೆ.  ಈ ಕುರಿತು ಮಾತನಾಡಿದ, ಸಿಐಎಸ್ಎಫ್‌ನ ಮಹಾನಿರ್ದೇಶಕರಾದ ನಿನಾ ಸಿಂಗ್, ಮಾಜಿ ಅಗ್ನಿವೀರರನ್ನು ಕೇಂದ್ರೀಯ ಸಶಸ್ತ್ರ ಪೊಲೀಸ್ ಪಡೆಗೆ ನೇಮಕ ಮಾಡಿಕೊಳ್ಳುವ ಕುರಿತಂತೆ ಗೃಹ ಸಚಿವಾಲಯ ಪ್ರಮುಖ ಹೆಜ್ಜೆಯನ್ನಿಟ್ಟಿದೆ. ಈ ಕುರಿತಂತೆ ಸಕಲ ಸಿದ್ಧತೆಯನ್ನು ಕೈಗೊಳ್ಳಲಾಗಿದೆ ಎಂದು ತಿಳಿಸಿದ್ದಾರೆ.

<><*<><>*><>

ದೆಹಲಿ ಅಬಕಾರಿ ನೀತಿ ಹಗರಣಕ್ಕೆ ಸಂಬಂಧಿಸಿದ ಅಕ್ರಮ ಹಣ ವರ್ಗಾವಣೆ ಪ್ರಕರಣದಲ್ಲಿ ದೆಹಲಿ ಮುಖ್ಯಮಂತ್ರಿ ಅರವಿಂದ್ ಕೇಜ್ರಿವಾಲ್ ಅವರಿಗೆ ಸರ್ವೋಚ್ಚ ನ್ಯಾಯಾಲಯ ಇಂದು ಮಧ್ಯಂತರ ಜಾಮೀನು ನೀಡಿದೆ. ನ್ಯಾಯಮೂರ್ತಿಗಳಾದ ಸಂಜೀವ್ ಖನ್ನಾ ಮತ್ತು ದೀಪಂಕರ್ ದತ್ತ ಅವರಿದ್ದ ಪೀಠ ಜಾರಿನಿರ್ದೇಶನಾಲಯದ ಬಂಧನವನ್ನು ಪ್ರಶ್ನಿಸಿ ಅರವಿಂದ್ ಕೇಜ್ರಿವಾಲ ಸಲ್ಲಸಿದ್ದ ಅರ್ಜಿಯನ್ನು ವಿಸ್ತೃತ ಪೀಠಕ್ಕೆ ಉಲ್ಲೇಖಿಸಿತ್ತು.  ಆದಾಗ್ಯೂ ಕಳೆದ ತಿಂಗಳ ೨೫ ರಂದು ಅಬಕಾರಿ ನೀತಿ ಪ್ರಕರಣಕ್ಕೆ ಸಂಬಂಧಿಸಿದಂತೆ ಭ್ರಷ್ಟಾಚಾರ ತಡೆ ಕಾಯ್ದೆಯಡಿ ಸಿಬಿಐ ಅವರನ್ನು ಬಂಧಿಸಿರುವ ಹಿನ್ನೆಲೆಯಲ್ಲಿ ಕೇಜ್ರಿವಾಲ್ ಬಂಧನದಲ್ಲೇ ಉಳಿಯಲಿದ್ದಾರೆ.

<><*<><>*><>

ಮುಂಬೈ ಷೇರು ಮಾರುಕಟ್ಟೆಯಲ್ಲಿಂದು ಷೇರು ಸಂವೇದಿ ಸೂಚ್ಯಂಕ-ಸೆನ್ಸೆಕ್ಸ್ ೬೨೨ ಅಂಕಗಳು ಏರಿಕೆಯಾಗಿದ್ದು, ದಿನದ ಅಂತ್ಯಕ್ಕೆ ೮೦ ಸಾವಿರದ ೫೧೯ ಅಂಕಗಳು ದಾಖಲಾಗಿದೆ. ಇದೇ ವೇಳೆ ರಾಷ್ಟ್ರೀಯ ಸಂವೇದಿ ಸೂಚ್ಯಂಕ-ನಿಫ್ಟಿ ೧೮೭ ಅಂಕಗಳು ಏರಿಕೆ ಕಂಡಿದ್ದು, ದಿನದ ಅಂತ್ಯಕ್ಕೆ ೨೪ ಸಾವಿರದ ೫೦೨ ಅಂಕಗಳು ದಾಖಲಾಗಿದೆ. ಅಮೆರಿಕನ್ ಡಾಲರ್ ಎದುರು ಭಾರತೀಯ ರೂಪಾಯಿ ಮೌಲ್ಯ ೮೩ ರೂಪಾಯಿ ೫೩ ಪೈಸೆಯಷ್ಟಾಗಿದೆ.

<><*<><>*><>

ಮುಂದಿನ ೫ ದಿನಗಳಲ್ಲಿ ದೇಶದ ಈಶಾನ್ಯ ಮತ್ತು ನೈರುತ್ಯ ಭಾಗಗಳಲ್ಲಿ ಭಾರೀ ಮಳೆಯಾಗಲಿದೆ ಎಂದು ಭಾರತೀಯ ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ.  ಕರ್ನಾಟಕ, ಕೊಂಕಣ,  ಗೋವಾ, ಮಹಾರಾಷ್ಟ್ರ,

ಗುಜರಾತ್, ತೆಲಂಗಾಣ, ಅಸ್ಸಾಂ, ಮೇಘಾಲಯ ಮತ್ತು ಒಡಿಶಾದ ಕೆಲವು ಪ್ರದೇಶಗಳಲ್ಲಿ ಇದೇ ೧೬ರ ವರಗೆ ಧಾರಾಕಾರ ಮಳೆಯಾಗಲಿದೆ.  ಉತ್ತರಾಖಂಡ, ಉತ್ತರ ಪ್ರದೇಶ, ಛತ್ತೀಸಗಢ, ಮಧ್ಯಪ್ರದೇಶ, ಹಿಮಾಚಲ ಪ್ರದೇಶ, ಪೂರ್ವ ರಾಜಸ್ಥಾನ, ಪಂಜಾಬ್, ವಿದರ್ಭ, ಪಶ್ಚಿಮ ಬಂಗಾಳ, ಸಿಕ್ಕಿಂ, ಬಿಹಾರ, ಅರುಣಾಚಲ ಪ್ರದೇಶ, ಅಂಡಮಾನ್ ಮತ್ತು ನಿಕೋಬಾರ್, ನಾಗಾಲ್ಯಾಂಡ್ ಮತ್ತು ಮಣಿಪುರದ ಹಲವು ಭಾಗಗಳಲ್ಲಿ ಇದೇ ೧೪ರ ವರೆಗೆ ತೀವ್ರ ಮಳೆಯಾಗಲಿದೆ ಎಂದು ಹವಾಮಾನ ಇಲಾಖೆ ತಿಳಿಸಿದೆ.

<><*<><>*><>

೭ ಭಾರತೀಯರು ಸೇರಿದಂತೆ ೬೫ ಪ್ರವಾಸಿಗರನ್ನು ಹೊಂದಿದ್ದ ಎರಡು ಬಸ್‌ಗಳು ನೇಪಾಳದ ತ್ರಿಶೂಲಿ ನದಿಗೆ ಉರುಳಿದ್ದು, ೬೫ ಪ್ರಯಾಣಿಕರು ನಾಪತ್ತೆಯಾಗಿದ್ದಾರೆ.  ನೇಪಾಳದ ಪೊಲೀಸ್ ಅಧಿಕಾರಿಗಳ ಪ್ರಕಾರ, ಗಣಪತಿ ಡಿಲಕ್ಸ್ ಹೆಸರಿನ ಬಸ್ ಕಾಠ್ಮಂಡುವಿನಿಂದ ರೌತಾಹತ್ ತೆರಳುತ್ತಿತ್ತು ಹಾಗೂ ಭಾರತೀಯರನ್ನು ಹೊಂದಿದ್ದ ಏಂಜೆಲ್ ಡಿಲಕ್ಸ್ ಬಸ್ ಬಿರ್ಗುಂಜ್‌ನಿಂದ ಕಾಠ್ಮಂಡುವಿಗೆ ತೆರಳುತ್ತಿತ್ತು. ಅಧಿಕ ಮಳೆಯ ಹಿನ್ನೆಲೆಯಲ್ಲಿ, ಮದನ್-ಆಶ್ರಿತ್ ಹೆದ್ದಾರಿಯಲ್ಲಿ ಸಂಭವಿಸಿದ ಭೂಕುಸಿತದ ಪರಿಣಾಮವಾಗಿ ಬಸ್‌ಗಳು ನದಿಗೆ ಉರುಳಿದ್ದು, ಕೊಚ್ಚಿಹೋಗಿವೆ. ನಾಪತ್ತೆಯಾಗಿರುವ ಭಾರತೀಯರನ್ನು ಸಂತೋಷ್ ಠಾಕೂರ್, ಸುರೇಂದ್ರ ಶಾ, ಆದಿತ್ಯ ಮಿಲಾನ್, ಸುನೀಲ್, ಶಾನವಾಜ್ ಅಲಂ, ಅನ್ಸಾರಿ ಎಂದು ಗುರುತಿಸಲಾಗಿದೆ.

<><*<><>*><>

ಲಂಡನ್‌ನಲ್ಲಿ ನಡೆಯುತ್ತಿರುವ ಪ್ರತಿಷ್ಠಿತ ವಿಂಬಲ್ಡನ್ ಟೆನಿಸ್ ಟೂರ್ನಿಯ ಅಂತಿಮ ಘಟ್ಟ ಸನ್ನಿಹಿತವಾಗಿದ್ದು, ಇಂದು ನಡೆಯುತ್ತಿರುವ ಮೊದಲ ಸೆಮಿಫೈನಲ್ ಪಂದ್ಯದಲ್ಲಿ ಹಾಲಿ ಚಾಂಪಿಯನ್ ಕಾರ್ಲೋಸ್ ಅಲ್ಕರಾಜ್ ಮತ್ತು ರಷ್ಯಾದ ೫ನೇ ಶ್ರೇಯಾಂಕಿತ ಡೇನಿಯಲ್ ಮೆಡ್ವೆಡೆವ್ ಮುಖಾಮುಖಿಯಾಗಿದ್ದಾರೆ. ಪಂದ್ಯ ಪ್ರಗತಿಯಲ್ಲಿದೆ.  ಇಂದು ನಡೆಯಲಿರುವ ಮತ್ತೊಂದು ಸೆಮಿಫೈನಲ್‌ನಲ್ಲಿ, ಏಳು ಬಾರಿಯ ಚಾಂಪಿಯನ್ ಮತ್ತು ಎರಡನೇ ಶ್ರೇಯಾಂಕದ ಸರ್ಬಿಯಾದ ನೊವಾಕ್ ಜೊಕೊವಿಕ್, ೨೫ ನೇ ಶ್ರೇಯಾಂಕದ ಇಟಾಲಿಯನ್ ಲೊರೆಂಜೊ ಮುಸೆಟ್ಟಿ ಅವರನ್ನು ಎದುರಿಸಲಿದ್ದಾರೆ. ಭಾರತೀಯ ಕಾಲಮಾನ ರಾತ್ರಿ ೮ ಗಂಟೆಗೆ ಪಂದ್ಯ ಆರಂಭವಾಗಲಿದೆ.  ಕಳೆದ ರಾತ್ರಿ ಲಂಡನ್‌ನಲ್ಲಿ ನಡೆದ ವಿಂಬಲ್ಡನ್ ಟೆನಿಸ್ ಟೂರ್ನಿಯ ಸೆಮಿಫೈನಲ್‌ನಲ್ಲಿ ಕಜಕಿಸ್ತಾನ್‌ನ ಎಲೆನಾ ರೈಬಾಕಿನಾ ವಿರುದ್ಧ ಜಯಗಳಿಸಿದ ನಂತರ ಜೆಕ್‌ನ ೩೧ ನೇ ಶ್ರೇಯಾಂಕದ ಬಾರ್ಬೊರಾ ಕ್ರೆಜ್ಸಿಕೋವಾ ವಿಂಬಲ್ಡನ್ ಟೆನಿಸ್‌ನಲ್ಲಿ ತಮ್ಮ ಮೊದಲ ಮಹಿಳಾ ಸಿಂಗಲ್ಸ್ ಫೈನಲ್‌ಗೆ ಪ್ರವೇಶಿಸಿದರು. ನಾಳೆ ನಡೆಯಲಿರುವ ಫೈನಲ್‌ನಲ್ಲಿ ಇಟಲಿಯ ಜಾಸ್ಮಿನ್ ಪಾವೊಲಿನಿ ವಿರುದ್ಧ ಕ್ರೆಜ್‌ಸಿಕೋವಾ ಪ್ರಶಸ್ತಿಗಾಗಿ ಸೆಣಸಾಟ ನಡೆಸಲಿದ್ದಾರೆ.